# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 407 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 16.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಜೀವನಾಡಿಯಾಗಿರುವ ಕಾರಂಜಾ ಜಲಾಶಯ ನಿರ್ಮಾಣವಾಗಿ 35-40 ವರ್ಷಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಜಲಾಶಯದಲ್ಲಿ ನೀರು ಸಂಗ್ರಹಣೆ 7 ಟಿಎಂಸಿ ಸಾಮರ್ಥ್ಯವಿದ್ದು, ಅದರಲ್ಲಿ 6 ಟಿಎಂಸಿ ನೀರು ಮಾತ್ರ ಶೇಖರಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಾರಂಜಾ ಯೋಜನೆಯ ನೀರಿನ ಸಂಗ್ರಹಣಾ ಸಾಮಾರ್ಥ್ಯ 7.691 ಟಿಎಂಸಿ ಆಗಿದ್ದು, ಪ್ರಸಕ್ತ ಸಾಲಿನಲ್ಲಿ ಗರಿಷ್ಠ ಮಟ್ಟದಲ್ಲಿ ನೀರು ಶೇಖರಣೆಯಾಗಿರುತ್ತದೆ. |
| ಇ) | ಹಾಗಿದ್ದಲ್ಲಿ, ಜಲಾಶಯದಲ್ಲಿ ಹೂಳು ತುಂಬಿದ್ದು, ಹೂಳು ತೆಗೆಯುವ ಯೋಜನೆ ಏನಾದರೂ ಸರ್ಕಾರದ ಮುಂದಿದೆಯೇ ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ತೆಗೆಯಲಾಗುವುದು; | ಕಾರಂಜಾ ಜಲಾಶಯದಲ್ಲಿ ಹೂಳು ತೆಗೆಯುವ ಪ್ರಸ್ತಾವನೆಯು ಇರುವುದಿಲ್ಲ. |
| ಈ) | ಹೂಳು ತುಂಬಿ ಜಲಾಶಯದ ಹಿನ್ನೀರಿನಿಂದ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಎಕರೆ ಪ್ರದೇಶ ರೈತರ ಜಮೀನಿನಲ್ಲಿ ಬೆಳೆಗಳು ಹಾಳಾಗಿವೆ ಮತ್ತು ಅದಕ್ಕೆ ಪರಿಹಾರವನ್ನು ನೀಡಲಾಗಿದೆಯೇ? | ಕಾರಂಜಾ ಜಲಾಶಯಕ್ಕೆ Radial spillway Gates ಅನ್ನು ಅಳವಡಿಸಲಾಗಿದೆ. ಗರಿಷ್ಠ ಸಾಮಾರ್ಥ್ಯವಾದ 7.691 ಟಿಎಂಸಿ.,ಗಿಂತ ಹೆಚ್ಚಿನ ನೀರು ಬಂದಲ್ಲಿ spillway gates ನಿಂದ ನೀರು ಹರಿಯುತ್ತದೆ. ಹಾಗಾಗಿ FRL ಮಟ್ಟಕ್ಕಿಂತ ಹೆಚ್ಚಿನ ನೀರನ್ನು ಸಂಗ್ರಹಿಸಲು ಸಾದ್ಯವಿರುವುದಿಲ್ಲ. ಆದ್ದರಿಂದ ಜಲಾಶಯದಲ್ಲಿ ಹೂಳು ತುಂಬಿ ಹಿನ್ನೀರಿನಲ್ಲಿನ ಜಮೀನಿನಲ್ಲಿ ಬೆಳೆಗಳು ಹಾಳಾಗುವ ಸಾಧ್ಯತೆ ಉದ್ಭವಿಸುವುದಿಲ್ಲ. |

ಜಸಂಇ 27 ಎಂಎಲ್ಎ 2022

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು.